# ಸಾರಾಂಶ

## ಮಾನ್ಯ ಸಭಾಪತಿಯವರು:

ವಿಧಾನ ಪರಿಷತ್ತಿನ 148ನೇ ಅಧಿವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:19.12.2022 ರಿಂದ 29.12.2022 ರವರೆಗೆ ಒಟ್ಟು 09 ದಿನಗಳು ಅಂದರೆ, 45 ಗಂಟೆ ನಡೆಸಲಾಗಿರುತ್ತದೆ.

ದಿನಾಂಕ:19.12.2022ರಂದು ಬೆಳಗ್ಗೆ 11.10 ಗಂಟೆಗೆ ಪ್ರಾರಂಭವಾಗಿ ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ದಿನಾಂಕ:21.12.2022 ರಂದು ನಡೆದ ವಿಧಾನ ಪರಿಷತ್ತಿನ ಸಭಾಪತಿ ಸ್ಥಾನದ ಚುನಾವಣೆಯಲ್ಲಿ ಮಾನ್ಯ ಶಾಸಕರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಅವರನ್ನು ಸಭಾಪತಿಯವರನ್ನಾಗಿ ಸರ್ವಾನುಮತದಿಂದ ಚುನಾಯಿಸಲಾಯಿತು.

ದಿನಾಂಕ:23.12.2022 ರಂದು ನಡೆದ ವಿಧಾನ ಪರಿಷತ್ತಿನ ಉಪ ಸಭಾಪತಿ ಸ್ಥಾನದ ಚುನಾವಣೆಯಲ್ಲಿ ಮಾನ್ಯ ಶಾಸಕರಾದ ಶ್ರೀ ಪ್ರಾಣೇಶ್ ಎಂ.ಕೆ. ಅವರನ್ನ ಉಪ ಸಭಾಪತಿಯವರನ್ನಾಗಿ ಚುನಾಯಿಸಲಾಯಿತು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, ಹಾಗೂ 03ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2021–22ನೇ ಸಾಲಿನ 6ನೇ ವರದಿ, ಅಧೀನ ಶಾಸನ ರಚನಾ ಸಮಿತಿಯ 2021–22ನೇ ಸಾಲಿನ 52ನೇ ವರದಿ ಹಾಗೂ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2021–22ನೇ ಸಾಲಿನ 4ನೇ ವರದಿ, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2021–22ನೇ ಸಾಲಿನ 37ನೇ ವರದಿ, ಸಾರ್ವಜನಿಕ ಲೆಕ್ಕಪತ್ರಗಳ 2021–22ನೇ ಸಾಲಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಕವಚ–108ಕ್ಕೆ ಸಂಬಂಧಿಸಿದ 8ನೇ ವರದಿ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಸಂಬಂಧಿಸಿದ "ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ" 9ನೇ ವರದಿ ಮತ್ತು ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯು 02 ಅರ್ಜಿಗಳನ್ನು ಹಾಗೂ 29ನೇ ವರದಿಯನ್ನು ಮತ್ತು ಖಾಸಗಿ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಯ ಮೊದಲನೇ ವರದಿಯನ್ನು ಮಂಡಿಸಲಾಯಿತು.

---2

ರಾಜ್ಯದಲ್ಲಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳನ್ನು ಕನ್ನಡಿಗರಿಗೆ ಮೀಸಲಿಡುವ ಕುರಿತು ಖಾಸಗಿ ನಿರ್ಣಯವನ್ನು ಮಂಡಿಸಲಾಯಿತು.

ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಬಿಡುಗಡೆಯಾದ ಹಣ ಬಳಕೆಯಾಗದಿರುವ ಬಗ್ಗೆ ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿ ಸಲ್ಲಿಸಲು ಮುಂದಿನ 6 ತಿಂಗಳವರೆಗೆ ವಿಸ್ತರಿಸುವ ಪ್ರಸ್ತಾವವನ್ನು ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ಕರ್ನಾಟಕ ವಿಧಾನ ಪರಿಷತ್ತಿನ ಸ್ಥಾಯಿ ಸಮಿತಿಗಳ ಅವಧಿಯು ದಿನಾಂಕ: 05.01.2023ಕ್ಕೆ ಮುಕ್ತಾಯಗೊಳ್ಳುತ್ತಿದ್ದು, 2023ರ ವಿಧಾನ ಸಭೆಯ ಸಾರ್ವತ್ರಿಕ ಚುನಾವಣೆಯ ನಂತರ ಸಮಿತಿಗಳ ಪುನರ್ ರಚನೆ ಮಾಡುವ ಪ್ರಸ್ತಾವನೆಯನ್ನು ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ಸದನದಲ್ಲಿ ದಿನಾಂಕ: 27.12.2022ರಂದು ಸರ್ಕಾರವು ಕರ್ನಾಟಕದ ನೆಲ, ಜಲ, ಭಾಷೆ ಹಾಗೂ ಕನ್ನಡಿಗರ ಹಿತಾಸಕ್ತಿಯ ವಿಷಯದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದಿರುವ ಕುರಿತು ಅಧಿಕೃತ ನಿರ್ಣಯವನ್ನು ಮಂಡಿಸಿದ್ದು ಸರ್ವಾನುಮತದಿಂದ ಅಂಗೀಕರಿಸಲಾಗಿರುತ್ತದೆ.

ಭಾರತ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆ (ಫೇಸ್–3) (2022ನೇ ವರ್ಷದ ವರದಿ ಸಂಖ್ಯೆ–6), 2021–22ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II), 2022–23ನೇ ಸಾಲಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿ ಹಾಗೂ 2022–23ನೇ ಸಾಲಿನ ಪೂರಕ ಅಂದಾಜುಗಳ (ಎರಡನೇ ಕಂತು) ವರದಿಯನ್ನು ಮಂಡಿಸಲಾಯಿತು.

2022ರಲ್ಲಿ ಇಂಗ್ಲೆಂಡಿನ ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ಕಾಮನ್‌ವೆಲ್ತ್ ಕ್ರೀಡಾಕೂಟ, ಅಂತರರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್‌ರವರು ಆಯೋಜಿಸಿದ್ದ ಮಹಿಳಾ ಟಿ–20 ವಿಶ್ವಕಪ್ ಕ್ರಿಕೆಟ್, ಪುರುಷರ ಐಪಿಎಲ್ ಕ್ರಿಕೆಟ್ ಟೂರ್ನಿ, ಕಬ್ಬಡಿ ಹಾಗೂ ಇತರೆ ಕ್ರೀಡಾಕೂಟದಲ್ಲಿ ಭಾರತವು ಅತ್ಯುತ್ತಮ ಸಾಧನೆಯನ್ನು ಮಾಡಿದ್ದು, ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಎಲ್ಲಾ ಕ್ರೀಡಾ ಪಟುಗಳಿಗೂ ದಿನಾಂಕ: 29.12.2022ರಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಅವರು ಮಂಡಿಸಿದ ಅಭಿನಂದನಾ ಪ್ರಸ್ತಾವಕ್ಕೆ ಸದನವು ಸಹಮತಿ ನೀಡಿರುತ್ತದೆ.

---3

ಪ್ರಸ್ತುತ ಅಧಿವೇಶನದಲ್ಲಿ **1419** ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ **150** ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 115 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಲಿಖಿತ ಮೂಲಕ ಉತ್ತರಿಸುವ ಒಟ್ಟು **1269** ಪ್ರಶ್ನೆಗಳ ಪೈಕಿ 963 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಗಳ ನಿಯಮ 37 (ಎ)ರ ರೀತ್ಯಾ ದಿನಾಂಕ: 30.12.2022ರಂದು ಉತ್ತರಿಸಬೇಕಾಗಿದ್ದ 15 ಪ್ರಶ್ನೆಗಳ ಪೈಕಿ 08 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತರಿಸುವ 102 ಪ್ರಶ್ನೆಗಳ ಪೈಕಿ 29 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು **04** ಸೂಚನೆಗಳನ್ನು ಸ್ವೀಕರಿಸಿದ್ದು, 01 ಸೂಚನೆಯನ್ನು ಚರ್ಚಿಸಿ ಉತ್ತರಿಸಲಾಯಿತು.

ನಿಯಮ 72ರಡಿಯಲ್ಲಿ **190** ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ **10** ಸೂಚನೆಗಳಿಗೆ ಉತ್ತರಿಸಲಾಯಿತು.

ನಿಯಮ 330ರಡಿಯಲ್ಲಿ **88** ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ **06** ಸೂಚನೆಗಳಿಗೆ ಉತ್ತರಿಸಲಾಯಿತು.

ಶೂನ್ಯ ವೇಳೆಯ ಒಟ್ಟು **72** ಸೂಚನೆಗಳ ಪೈಕಿ **14** ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಗಿದ್ದು, **22** ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ನಿಯಮ **59**ರ ಅಡಿಯಲ್ಲಿ **07** ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಒಂದು ಸೂಚನೆಯನ್ನು ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ವಿಧೇಯಕದೊಂದಿಗೆ ಚರ್ಚಿಸಿ ಉತ್ತರಿಸಲಾಯಿತು. ಮೂರು ಸೂಚನೆಗಳನ್ನು ನಿಯಮ 68ಕ್ಕೆ ಪರಿವರ್ತಿಸಲಾಗಿದ್ದು, ಅವುಗಳಲ್ಲಿ ಎರಡು ಸೂಚನೆಗಳನ್ನು ಒಂದುಗೂಡಿಸಿ ಚರ್ಚಿಸಿ ಉತ್ತರಿಸಲಾಯಿತು. ಮತ್ತೊಂದು ಸೂಚನೆಯನ್ನು ನಿಯಮ 330ಕ್ಕೆ ಪರಿವರ್ತಿಸಿ ಉತ್ತರಿಸಲಾಯಿತು ಉಳಿದ 02 ಸೂಚನೆಗಳನ್ನು ತಿರಸ್ಕರಿಸಲಾಯಿತು.

ನಿಯಮ 68ರ ಅಡಿಯಲ್ಲಿ 04 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 02 ಸೂಚನೆಗಳನ್ನು ತಿರಸ್ಕರಿಸಿದ್ದು, 01 ಸೂಚನೆಯನ್ನು ಚರ್ಚಿಸಿ ಉತ್ತರಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತರೂಪದಲ್ಲಿರುವ ಒಟ್ಟು 07 ವಿಧೇಯಕಗಳಲ್ಲಿ **07** ವಿಧೇಯಕಗಳನ್ನು ಹಾಗೂ ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತರೂಪದಲ್ಲಿರುವ 01 ವಿಧೇಯಕವನ್ನು ಮತ್ತು ವಿಧಾನ ಪರಿಷತ್ತಿನಲ್ಲಿ ಮಂಡಿಸಿದ **02** ವಿಧೇಯಕಗಳನ್ನು ಅಂಗೀಕರಿಸಿ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

---4

**<u>ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ</u>:–**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ವಿರೋಧ ಪಕ್ಷದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, **<u>ಸದನವನ್ನು ಅನಿರ್ದಿಷ್ಟಕಾಲದವರೆಗೆ ಮುಂದೂಡುತ್ತಿದ್ದೇನೆ</u>.**

* * * * *

2022ರಲ್ಲಿ ಇಂಗ್ಲೆಂಡಿನ ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ಕಾಮನ್‌ವೆಲ್ತ್ ಕ್ರೀಡಾಕೂಟ, ಅಂತರರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್‌ರವರು ಆಯೋಜಿಸಿದ್ದ ಮಹಿಳಾ ಟಿ–20 ವಿಶ್ವಕಪ್ ಕ್ರಿಕೆಟ್, ಪುರುಷರ ಐಪಿಎಲ್ ಕ್ರಿಕೆಟ್ ಟೂರ್ನಿ, ಕಬ್ಬಡಿ ಹಾಗೂ ಇತರೆ ಕ್ರೀಡಾಕೂಟದಲ್ಲಿ ಭಾರತವು ಅತ್ಯುತ್ತಮ ಸಾಧನೆಯನ್ನು ಮಾಡಿದ್ದು, ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಎಲ್ಲಾ ಕ್ರೀಡಾ ಪಟುಗಳಿಗೂ ದಿನಾಂಕ: 29.12.2022ರಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಅವರು ಮಂಡಿಸಿದ ಅಭಿನಂದನಾ ಪ್ರಸ್ತಾವಕ್ಕೆ ಸದನವು ಸಹಮತಿ ನೀಡಿರುತ್ತದೆ.